<u>ಸಾಕ್ಷಿಯನ್ನು ದಿನಾಂಕಃ **09.04.2025** ರಂದು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.</u>

<u>ಪಾಟೀ ಸವಾಲುಃ ಪ್ರತಿವಾದಿ ಪರ ಶ್ರೀ. ವಕೀಲರಿಂದ:</u>

ನನ್ನ ಮುಖ್ಯವಿಚಾರಣೆ ಪ್ರಮಾಣ ಪತ್ರ ಆಂಗ್ಲ ಭಾಷೆಯಲ್ಲಿದ್ದು ಅದರ ವಿಚಾರ ಗೊತ್ತಿಲ್ಲ ಎಂದರೆ ಸರಿ. ನಾನು ಮತ್ತು ನನ್ನ ಸಹೋದರಿಯರು ಮದುವೆಯಾದ ನಂತರ ನಮ್ಮ ನಮ್ಮ ಗಂಡನ ಮನೆಯಲ್ಲಿ ವಾಸವಿದ್ದೇವೆ ಎಂದರೆ ಸಾಕ್ಷಿಯು ತವರು ಮನೆಗೆ ಹೋಗಿ ಬಂದು ಮಾಡುತ್ತೇವೆ ಎಂದು ನುಡಿಯುತ್ತಾರೆ. ನನ್ನ ಮದುವೆಯಾಗಿ 45 ವರ್ಷಗಳಾಗಿವೆ. ನನ್ನ ಉಳಿದ ಸಹೋದರಿಯರ ಮದುವೆಯು ನನ್ನ ಮದುವೆಗೂ ಮೊದಲು ಅವರ ಮದುವೆಯಾಗಿರುತ್ತದೆ. ನನ್ನ ತಾತನ ಹೆಸರು ರಂಗಶೆಟ್ಟಿ. ನನ್ನ ತಾತನ ಹೆಸರಿನಲ್ಲಿ ಆಸ್ತಿಗಳು ಇದ್ದ ಕುರಿತು ದಾಖಲೆಗಳನ್ನು ಹಾಜರುಪಡಿಸಿಲ್ಲ. ನನ್ನ ತಾತನ ಹೆಸರಿನಲ್ಲಿ ಯಾವುದೇ ಆಸ್ತಿಗಳು ಇರಲಿಲ್ಲ ಎಂದರೆ ಸರಿಯಲ್ಲ. ನನ್ನ ಒಡಹುಟ್ಟಿದವರಲ್ಲಿ 7 ಜನ ಮರಣ ಹೊಂದಿದ್ದಾರೆ ಎಂದರೆ ಸರಿ.

2. ನಮ್ಮ ಕುಟುಂಬದಲ್ಲಿ ಎಷ್ಟು ಉತ್ಪತ್ತಿ ಬರುತ್ತಿತ್ತು ಎಂದು ದಾಖಲೆ ಹಾಜರುಪಡಿಸಿಲ್ಲ ಎಂದರೆ ಸರಿ. ನಿಪಿ.17 ರ ಆಸ್ತಿಯನ್ನು 2 ನೇ ಪ್ರತಿವಾದಿ ಗಾಣದ ಎಣ್ಣೆಯಿಂದ ದುಡಿದು, ಸಂಪಾದಿಸಿದ ಸ್ವಯಾರ್ಜಿತ ಆಸ್ತಿಯಾಗಿದೆ ಎಂದರೆ ಸರಿಯಲ್ಲ. ನಿಪಿ.17 ರ ಆಸ್ತಿಯ ಕ್ರಯಪತ್ರವನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿಲ್ಲ. ನಿಪಿ.1 ರ ಆಸ್ತಿ 2 ನೇ ಪ್ರತಿವಾದಿಯ ಹೆಸರಿನಲ್ಲಿ ಕ್ರಯ ಪತ್ರ ಇರುತ್ತದೆ ಎಂದರೆ ಸರಿಯಲ್ಲ. ನಿಪಿ.17 ರ ಆಸ್ತಿ ನಾವು ಯಾರು ಹಣದ ಸಹಾಯ ಖರೀದಿ ಮಾಡಲು ಮಾಡಿಲ್ಲ ಎಂದರೆ ಸರಿಯಲ್ಲ.

ನಾವು ಸದರಿ ಆಸ್ತಿಯನ್ನು ಖರೀದಿ ಮಾಡಲು ಹಣ ಸಹಾಯ ಮಾಡಿದೆವು ಎಂದು ಯಾವುದೇ ದಾಖಲೆಯನ್ನು ಹಾಜರುಪಡಿಸಿಲ್ಲ. ನಾನು ಈ ದಾವೇಯಲ್ಲಿ ಕೋರಿರುವ ಪರಿಹಾರಕ್ಕೆ ಅರ್ಹಳಲ್ಲ ಎಂದರೆ ಸರಿಯಲ್ಲ. ನಾನು ಪಾವತಿಸಿರುವ ನ್ಯಾಯಾಲಯದ ಶುಲ್ಕ ಸಮರ್ಪಕವಾಗಿಲ್ಲ ಎಂದರೆ ಸರಿಯಲ್ಲ. ನಿಪಿ.17 ರ ಆಸ್ತಿ 2 ನೇ ಪ್ರತಿವಾದಿಯ ಸ್ವಯಾರ್ಜಿತ ಆಸ್ತಿಯಾಗಿದ್ದ ಕಾರಣ, ಸದರಿ ಆಸ್ತಿಯನ್ಜ್ನು ಈ ದಾವೇ ಹೂಡಿದ ಆರಂಭದ್ಲಿ ಸೇರಿಸದೇ, ನಂತರದಲ್ಲಿ ಸೇರಿಸಿ, ಸುಳ್ಳು ಪರಿಹಾರ ಕೋರುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಮರುವಿಚಾರಣೆಃ ಇಲ್ಲ</u>

*<u>( ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು .)</u>*

ಓ. ಹೇ.ಕೇ. ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ .
ಕುಣಿಗಲ್.